ಕರ್ನಾಟಕ ಸರ್ಕಾರ
(ಸಿ.ಆರ್.ಪಿ.67)

**ಹೇಳಿಕೆ ಹಾಳೆ**
**(ಆರ್.ಪಿ.ಸಂಖ್ಯೆ 57)**
**ನಮೂನೆ ಸಂಖ್ಯೆ 4**

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ಹಾಗೂ ಸ್ಪೆಷಲ್ ನ್ಯಾಯಾಧೀಶರ ನ್ಯಾಯಾಲಯ, ಹಾಸನ**

**ಸ್ಪೆಷಲ್ ಕೇಸ್ ನಂಬರ್ : 103/2015**

**ಫ್ರಾಸಾ- 13 ಚಾಸಾ- 51**

| | | |
|---|---|---|
| ಸಾಕ್ಷಿದಾರರ ಹೆಸರುಃ | : | ನಂದೀಶ್ |
| ತಂದೆಯ ಹೆಸರುಃ | : | ಸಿದ್ದೇಗೌಡ |
| ವಯಸ್ಸುಃ | : | 60 ವರ್ಷ |
| ಉದ್ಯೋಗಃ | : | ನಿವೃತ್ತ ಮ್ಯಾನೇಜರ್ |
| ವಾಸ | : | ಹಾಸನ |

**ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಿದ ದಿನಾಂಕ: 19-09-2025:**

**ಮುಖ್ಯ ವಿಚಾರಣೆಃ ಸರ್ಕಾರದ ಪರವಾಗಿ ಮಾನ್ಯ ವಿಶೇಷ ಅಭಿಯೋಜಕರಿಂದಃ**

ನಾನು 2002ರಿಂದ 2025ರವರೆಗೆ ಜೀವನ್ ಹೌಸಿಂಗ್ ಕಾರ್ಪೊರೇಶನ್ ಲಿಮಿಟೆಡ್ ಹಾಸನ ಶಾಖೆಯಲ್ಲಿ ವ್ಯವಸ್ಥಾಪಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2.ದಿನಾಂಕ 16-11-13ರಂದು ಹಾಸನ ಲೋಕಾಯುಕ್ತ ಕಛೇರಿಯ ಪೊಲೀಸ್ ನಿರೀಕ್ಷಕರು ಜೆ.ಪಿ.ಆನಂದ ಇಂಜಿನಿಯರ್ ಮತ್ತು ಅವರ ಹೆಂಡತಿ ಶುಭಾ ಎನ್ನುವವರ ಸಾಲಕ್ಕೆ ಸಂಬಂಧಿಸಿದ ಮಾಹಿತಿಯನ್ನು ನೀಡುವಂತೆ ಪತ್ರ ಸಲ್ಲಿಸಿದ್ದರು. ಆ ಪತ್ರವನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-72 ಎಂದು ಅದರಲ್ಲಿ ನನ್ನ ರುಜು ಇದ್ದು ನಿಪಿ-72(ಎ) ಎಂದು ಗುರುತಿಸಲಾಯಿತು. ಅದರಂತೆ ನಾನು 6-12-2013ರಂದು ಆ ಮಾಹಿತಿಯನ್ನು ನೀಡಿರುತ್ತೇನೆ. ಅದನ್ನು ಈಗ ನೋಡುತ್ತಿದ್ದು ನಿಪಿ-73 ಎಂದು ಅದರಲ್ಲಿ ನನ್ನ ರುಜು ಇದ್ದು ನಿಪಿ-73(ಎ) ಎಂದು ಗುರುತಿಸಲಾಯಿತು. ಅವರಿಬ್ಬರಿಗೂ ಸಾಲವನ್ನು ಜಂಟಿಯಾಗಿ ನೀಡಿರುತ್ತೇವೆ. ಅವರು 11,72,027ರೂಪಾಯಿ ಸಾಲವನ್ನು ಪಡೆದಿದ್ದರು. ಆ ಸಾಲದ

ಅವಧಿ 20 ವರ್ಷ ಆಗಿತ್ತು. ಅದಕ್ಕೆ ಕಟ್ಟಬೇಕಾದ ಮಾಸಿಕ ಕಂತಿನ ಹಣವನ್ನು ಕೂಡ ನಿಪಿ-73ರಲ್ಲಿ ನಮೂದಿಸಿರುತ್ತೇನೆ.

**ಪಾಟೀಸವಾಲುಃ ಆರೋಪಿ ಪರ** ಶ್ರೀ ಡಿ ಎಂ ಪಿ **ವಕೀಲರಿಂದಃ**

11,72,027ರೂಪಾಯಿಯಲ್ಲಿ ರೂ.92,027ವಿಮಾ ಹಣ ಸೇರಿತ್ತು. ಸಾಲದ ಹಣದಲ್ಲಿ ವಿಮಾ ಹಣವನ್ನು ಕಡಿತಗೊಳಿಸಿ ಸಾಲವನ್ನು ಬಿಡುಗಡೆಗೊಳಿಸುತ್ತೇವೆ. ಆ ವಿಮಾ ಪಾಲಿಸಿಯ ಹಣವನ್ನು ಸೇರಿಸಿಕೊಂಡು ಇಎಂಐ ನಿಗಧಿಪಡಿಸುತ್ತೇವೆ.

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು)

**ಓ.ಹೇ.ಕೇ.ಸ.ಇದೆ.**

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ಹಾಗೂ ಸ್ಪೆಷಲ್**

**ನ್ಯಾಯಾಧೀಶರು, ಹಾಸನ.**